ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಕೇಂದ್ರ

ಪತ್ರಿಕೆಯ ಹೆಸರು : NAME OF THE NEWS PAPER : ಕನ್ನಡಪ್ರಭ    ದಿನಾಂಕ : DATE : 02/06/2019

# ಮೋದಿ ಸಂಪುಟದ 56 ಸಚಿವರ ಪೈಕಿ 51 ಮಂದಿ ಕೋಟ್ಯಧಿಪತಿ

ನವದೆಹಲಿ: ಪ್ರಧಾನಿ ನರೇಂದ್ರ ಮೋದಿ ಅವರ ಸಂಪುಟದ 56 ಸದಸ್ಯರ ಪೈಕಿ 51 ಮಂದಿ ಕೋಟ್ಯಧಿಪತಿಗಳು ಎಂದು ಚುನಾವಣೆಯ ವಿಚಕ್ಷಣ ಸಂಸ್ಥೆಯಾಗಿ ಕಾರ್ಯ ನಿರ್ವಹಿಸುವ ಪ್ರಜಾಪ್ರಭುತ್ವ ಸುಧಾರಣೆ ಸಂಸ್ಥೆ (ಎಡಿಆರ್) ಹೇಳಿದೆ. ಅಲ್ಲದೆ, ಸಂಪುಟದಲ್ಲಿ 22 ಸಚಿವರು ತಮ್ಮ ಮೇಲೆ ಕ್ರಿಮಿನಲ್ ಕೇಸ್‌ಗಳಿವೆ ಎಂದು ತಾವೇ ಚುನಾವಣೆ ಸ್ಪರ್ಧೆ ವೇಳೆ ಘೋಷಿಸಿಕೊಂಡಿದ್ದಾರೆ ಎಂದು ಎಡಿಆರ್ ತಿಳಿಸಿದೆ. ಇದೇ ವೇಳೆ ಕೇಂದ್ರದ ಒಟ್ಟು ಸಚಿವರ ಪೈಕಿ 47 ಮಂದಿ ಪದವಿ ಪೂರೈಸಿದ್ದು, 8 ಸಚಿವರು 10-12ನೇ ತರಗತಿವರೆಗೂ ಮಾತ್ರವೇ ಶಿಕ್ಷಣ ಪೂರೈಸಿದ್ದಾಗಿ ಘೋಷಿಸಿಕೊಂಡಿದ್ದಾರೆ. 58 ಸಚಿವರ ಪೈಕಿ ರಾಜ್ಯಸಭೆ ಹಾಗೂ ಲೋಕಸಭೆಯಿಂದ ಆಯ್ಕೆಯಾದ ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ 56 ಸಚಿವರ ಅಫಿಡವಿಟ್‌ಗಳನ್ನು ವಿಶ್ಲೇಷಣೆ ಮಾಡಿ ಎಡಿಆರ್ ಈ ವರದಿ ಬಿಡುಗಡೆ ಮಾಡಿದೆ. ಆದರೆ, ಇದುವರೆಗೂ ಲೋಕಸಭೆ ಅಥವಾ ರಾಜ್ಯಸಭೆಗೆ ಆಯ್ಕೆಯಾಗದ ಕೇಂದ್ರ ಸಚಿವರಾದ ರಾಮ್ ವಿಲಾಸ್ ಪಾಸ್ವಾನ್ ಹಾಗೂ ಎಸ್. ಜೈಶಂಕರ್ ಅವರ ಬಗ್ಗೆ ಅಧ್ಯಯನ ನಡೆಸಲಾಗಿಲ್ಲ. 51 ಕೋಟ್ಯಾಧಿಪತಿ ಸಚಿವರ ಪೈಕಿ ಅಮಿತ್ ಶಾ, ಪಿಯೂಷ್ ಗೋಯಲ್ ಹಾಗೂ ಹರ್‌ಸಿಮ್ರತ್ ಕೌರ್ ಬಾದಲ್ ತಲಾ 40 ಕೋಟಿ ಆಸ್ತಿ ಇದೆ ಎಂದು ಘೋಷಿಸಿಕೊಂಡಿದ್ದಾರೆ. ಇನ್ನು ಮೋದಿ ಕ್ಯಾಬಿನೆಟ್‌ನಲ್ಲಿರುವ 22 ಸಚಿವರ ವಿರುದ್ಧ ಕ್ರಿಮಿನಲ್ ಕೇಸ್‌ಗಳು ದಾಖಲಾಗಿವೆ. ಈ ಪೈಕಿ 16 ಮಂದಿ ವಿರುದ್ಧ ಕೊಲೆಗೆ ಯತ್ನ, ಕೋಮು ಸೌಹಾರ್ದತೆಗೆ ಧಕ್ಕೆ, ಚುನಾವಣಾ ನಿಯಮಗಳ ಉಲ್ಲಂಘನೆ ಸೇರಿದಂತೆ ಇನ್ನಿತರ ಗಂಭೀರ ಪ್ರಕರಣಗಳು ದಾಖಲಾಗಿವೆ. ಕಳೆದ ಬಾರಿಗಿಂತ ಈ ಬಾರಿ ಕ್ರಿಮಿನಲ್ ಹಿನ್ನೆಲೆ ಹೊಂದಿದ ಸಚಿವರ ಸಂಖ್ಯೆ ಹೆಚ್ಚಾಗಿದೆ ಎಂದು ಎಡಿಆರ್ ತನ್ನ ವರದಿಯಲ್ಲಿ ಉಲ್ಲೇಖಿಸಿದೆ.